**All India Radio: Bangalore**
**National Bulletin In Kannada**
**11.09.2026  07.35 a.m.**
**ಆಕಾಶವಾಣಿ, ಬೆಂಗಳೂರು**

ರಾಷ್ಟ್ರೀಯ ವಾರ್ತೆಗಳು
**11.09.2026  07.35 a.m.**
****************

ಮುಖ್ಯಾಂಶಗಳು

೧. ಆಹಾರ, ಪೌಷ್ಟಿಕಾಂಶ ಭದ್ರತೆ ಬಲಪಡಿಸಲು ಸಮಗ್ರ ವಿಧಾನ ಅಳವಡಿಸಿಕೊಳ್ಳುವಂತೆ ರೈತರಿಗೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಕರೆ

೨. ರಾಜಕುಮಾರ ರಹೀಮ್ ಆಗಾ ಖಾನ್ ಅವರೊಂದಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾತುಕತೆ

೩. ಕಾಂಗೋದಲ್ಲಿ ಅಗ್ನಿ ಅವಘಡ; ಕನಿಷ್ಠ ೨೬ ವಿದ್ಯಾರ್ಥಿಗಳು ಸಾವು, ೧೨ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಗಾಯ

೪. ಮಹಿಳಾ ಏಷ್ಯಾ ಕಪ್: ಬಾಂಗ್ಲಾದೇಶದ ವಿರುದ್ಧ ಗೆದ್ದು ಫೈನಲ್‌ಗೆ ಲಗ್ಗೆಯಿಟ್ಟ ಭಾರತ

****************

ಒಣಭೂಮಿ ಕೃಷಿಯನ್ನು ಪರಿವರ್ತಿಸಲು ಹಾಗೂ ಆಹಾರ ಮತ್ತು ಪೌಷ್ಟಿಕಾಂಶ ಭದ್ರತೆಯನ್ನು ಬಲಪಡಿಸಿ ರೈತರ ಜೀವನೋಪಾಯವನ್ನು ಸುಧಾರಿಸಲು ವಿಜ್ಞಾನ, ನೀತಿ ಮತ್ತು ಮಾರುಕಟ್ಟೆ ಬೆಂಬಲವನ್ನು ಒಳಗೊಂಡ ಸಮಗ್ರ ವಿಧಾನವನ್ನು ಅಳವಡಿಸಿಕೊಳ್ಳುವಂತೆ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಕರೆ ನೀಡಿದ್ದಾರೆ.

ನವದೆಹಲಿಯಲ್ಲಿ ನಡೆದ 'ಒಣಭೂಮಿ ಪ್ರದೇಶ ೨೦೨೬'ರ ಉದ್ಘಾಟನಾ ಅಧಿವೇಶನ ಉದ್ದೇಶಿಸಿ ಮಾತನಾಡಿದ ಅವರು, ಸೂಕ್ತ ವೈಜ್ಞಾನಿಕ ಕ್ರಮಗಳು, ನೀತಿಗಳು ಮತ್ತು ಮಾರುಕಟ್ಟೆ ಬೆಂಬಲದೊಂದಿಗೆ, ಒಣಭೂಮಿ ಪ್ರದೇಶಗಳು ಭಾರತಕ್ಕೆ ಹಾಗೂ ಇದೇ ರೀತಿಯ ಸವಾಲುಗಳನ್ನು ಎದುರಿಸುತ್ತಿರುವ ಇತರ ಪ್ರದೇಶಗಳಿಗೆ ಬಲದ ಮೂಲವಾಗಬಲ್ಲವು ಎಂದು ಅಭಿಪ್ರಾಯಪಟ್ಟರು.

ಕೃಷಿ ವ್ಯವಸ್ಥೆ ಪರಿವರ್ತಿಸುವ ಪ್ರಯತ್ನಗಳಲ್ಲಿ ಆಹಾರ ಭದ್ರತೆ, ಪೌಷ್ಟಿಕಾಂಶ ಭದ್ರತೆ ಮತ್ತು ರೈತರ ಸಮೃದ್ಧಿಯು ಕೇಂದ್ರಬಿಂದುವಾಗಿರಬೇಕು. ಯಶಸ್ಸಿನ ಅಂತಿಮ ಮಾನದಂಡವು ಕೇವಲ ಉತ್ಪಾದನೆಯ ಹೆಚ್ಚಳವಾಗಿರಬಾರದು, ಬದಲಿಗೆ ಕೃಷಿ ಸಮುದಾಯಗಳ ಜೀವನೋಪಾಯದ ಸುಧಾರಣೆ ಮತ್ತು ಸಮೃದ್ಧಿಯೂ ಆಗಿರಬೇಕು ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

ಸಮಾವೇಶದಲ್ಲಿ ೨೫ಕ್ಕೂ ಹೆಚ್ಚು ದೇಶಗಳ ೮೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದಾರೆ.

****************

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದಿನಿಂದ ದಾದ್ರಾ ಮತ್ತು ನಗರ ಹವೇಲಿ ಹಾಗೂ ದಮನ್ ಮತ್ತು ದಿಯುಗೆ ಎರಡು ದಿನಗಳ ಭೇಟಿ ಕೈಗೊಳ್ಳಲಿದ್ದಾರೆ.

ತಮ್ಮ ಭೇಟಿಯ ಸಂದರ್ಭದಲ್ಲಿ ಉಪರಾಷ್ಟ್ರಪತಿಯವರು, ಸಿಲ್ವಾಸ್ಸಾದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಸರ್ಕಾರಿ ಕಾಲೇಜಿನಲ್ಲಿ ನಡೆಯಲಿರುವ ಸಾರ್ವಜನಿಕ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಲಿದ್ದಾರೆ.

ಅವರು ಸಿಲ್ವಾಸ್ಸಾದ ಸ್ವಾಮಿ ವಿವೇಕಾನಂದ ವಿದ್ಯಾ ಮಂದಿರ ಹಾಗೂ 'ನಮೋ' ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ಮತ್ತು ದಮನ್‌ನಲ್ಲಿ ಇತ್ತೀಚೆಗಷ್ಟೇ ಉದ್ಘಾಟನೆಗೊಂಡ 'ನಮೋ' ಆಸ್ಪತ್ರೆಗೆ ಭೇಟಿ ನೀಡಲಿದ್ದಾರೆ.

ಜೊತೆಗೆ, ದಮನ್ ನೈಟ್ ಮಾರ್ಕೆಟ್, ರಾಮಸೇತು ಸೀಫ್ರಂಟ್ ಮತ್ತು ನಮೋಪಥ್ ಸೀಫ್ರಂಟ್ ಸೇರಿದಂತೆ ಪ್ರಮುಖ ಪ್ರವಾಸೋದ್ಯಮ ಮತ್ತು ಜಲತೀರ ಅಭಿವೃದ್ಧಿ ಸ್ಥಳಗಳಿಗೂ ಅವರು ಭೇಟಿ ನೀಡಲಿದ್ದಾರೆ.

****************

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನವದೆಹಲಿಯಲ್ಲಿ ರಾಜಕುಮಾರ ರಹೀಮ್ ಆಗಾ ಖಾನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ.

ಸಾಮಾಜಿಕ ಅಭಿವೃದ್ಧಿ, ನೀರಾವರಿ, ಸಹಕಾರ ಸಂಘಗಳು, ನೈಸರ್ಗಿಕ ಕೃಷಿ ಮತ್ತು ಸೌರಶಕ್ತಿಯ ಕ್ಷೇತ್ರಗಳಲ್ಲಿ ಸಹಕಾರ ಬಲಪಡಿಸುವ ಕುರಿತು ಉಭಯ ನಾಯಕರು ಚರ್ಚಿಸಿದರು.

ಮಾನವ ಅಭಿವೃದ್ಧಿಯ ಬಗೆಗಿನ ಸಮಾನ ಬದ್ಧತೆಯಿಂದಾಗಿ 'ಆಗಾ ಖಾನ್ ಡೆವಲಪ್‌ಮೆಂಟ್ ನೆಟ್‌ವರ್ಕ್'ನೊಂದಿಗೆ ಭಾರತ ಹೊಂದಿರುವ ಬಾಂಧವ್ಯವನ್ನು ಅತ್ಯಂತ ಗೌರವದಿಂದ ಕಾಣುತ್ತದೆ. ಸುಸ್ಥಿರ ಅಭಿವೃದ್ಧಿ ಮತ್ತು ಮಾನವಕುಲದ ಒಳಿತಿಗಾಗಿ ಈ ಪಾಲುದಾರಿಕೆಗಳನ್ನು ಮತ್ತಷ್ಟು ಮುನ್ನಡೆಸುವ ತಮ್ಮ ಸಮಾನ ಬದ್ಧತೆಯನ್ನೂ ಸಚಿವ ಅಮಿತ್ ಶಾ ಪುನರುಚ್ಚರಿಸಿದರು.

****************

ಸಂಸದೀಯ ಮಾದರಿಯ ಪ್ರಜಾಪ್ರಭುತ್ವವು ವಿಶ್ವದ ಅತ್ಯುತ್ತಮ ಆಡಳಿತ ವ್ಯವಸ್ಥೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಪ್ರತಿಪಾದಿಸಿದ್ದಾರೆ.

ನವದೆಹಲಿಯ ಸಂಸತ್ ಭವನದ ಜಿಎಂಸಿ ಬಾಲಯೋಗಿ ಸಭಾಂಗಣದಲ್ಲಿ ನಡೆದ ೨೭ನೇ ರಾಷ್ಟ್ರೀಯ ಯುವ ಸಂಸತ್ ಸ್ಪರ್ಧೆ ೨೦೨೪-೨೫ರ ಪ್ರಶಸ್ತಿ ಪ್ರದಾನ ಸಮಾರಂಭದ ನಂತರ ಅವರು ಜವಾಹರ ನವೋದಯ ವಿದ್ಯಾಲಯಗಳ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ನಾಗರಿಕರು ತಮ್ಮ ಚುನಾಯಿತ ಪ್ರತಿನಿಧಿಗಳ ಮೂಲಕ ಸ್ವತಃ ಆಡಳಿತ ನಡೆಸುವ ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆಯು ಭಾರತಕ್ಕೆ ಅತ್ಯಂತ ಸೂಕ್ತವಾಗಿದೆ. ವಿದ್ಯಾರ್ಥಿಗಳ ವ್ಯಕ್ತಿತ್ವವನ್ನು ಸರಿಯಾದ ದಿಕ್ಕಿನಲ್ಲಿ ರೂಪಿಸುವ ಜವಾಹರ ನವೋದಯ ವಿದ್ಯಾಲಯಗಳ ಕಾರ್ಯವನ್ನು ಅವರು ಶ್ಲಾಘಿಸಿದರು.

ಮಣಿಪುರದ ಪಿಎಂ ಶ್ರೀ ಜವಾಹರ ನವೋದಯ ವಿದ್ಯಾಲಯ ೨೭ನೇ ರಾಷ್ಟ್ರೀಯ ಯುವ ಸಂಸತ್ ಸ್ಪರ್ಧೆ ೨೦೨೪-೨೫ರ ರಾಷ್ಟ್ರೀಯ ವಿಜೇತ ಶಾಲೆಯಾಗಿ ಹೊರಹೊಮ್ಮಿತು.

****************

೧೮ನೇ ಬ್ರಿಕ್ಸ್ ಶೃಂಗಸಭೆ ನಾಳೆಯಿಂದ ನವದೆಹಲಿಯ ಭಾರತ್ ಮಂಟಪದಲ್ಲಿ ಆರಂಭವಾಗಲಿದೆ. ಎರಡು ದಿನಗಳ ಶೃಂಗಸಭೆಯಲ್ಲಿ ೧೧ ಪ್ರಮುಖ ಉದಯೋನ್ಮುಖ ಹಾಗೂ ಅಭಿವೃದ್ಧಿಶೀಲ ರಾಷ್ಟ್ರಗಳು ಭಾಗವಹಿಸಲಿವೆ. ಬ್ರಿಕ್ಸ್ ಪಾಲುದಾರ ರಾಷ್ಟ್ರಗಳೂ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿವೆ.

ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್, ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಸೇರಿದಂತೆ ಹಲವು ರಾಷ್ಟ್ರಗಳ ನಾಯಕರು ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಇಥಿಯೋಪಿಯಾ ಪ್ರಧಾನಿ ಅಬಿ ಅಹ್ಮದ್ ಅಲಿ ಕೂಡ ಪಾಲ್ಗೊಳ್ಳಲಿದ್ದಾರೆ.

ನಾಳೆ ಸಮಾವೇಶದ ಮೊದಲ ಅಧಿವೇಶನ 'ಸಮಗ್ರ ಜಾಗತಿಕ ಆಡಳಿತ ಮತ್ತು ಬಹುಪಕ್ಷೀಯತೆಯ ಬಲವರ್ಧನೆ' ವಿಷಯದ ಕುರಿತು ನಡೆಯಲಿದೆ. ಭಾನುವಾರ ಪಾಲುದಾರ ರಾಷ್ಟ್ರಗಳ ನಾಯಕರೊಂದಿಗೆ 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ' ಕುರಿತು ಚರ್ಚೆ ನಡೆಯಲಿದೆ.

ಬ್ರಿಕ್ಸ್ ಶೃಂಗಸಭೆ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ವ್ಯಾಪಕ ಭದ್ರತಾ ವ್ಯವಸ್ಥೆ ಕೈಗೊಳ್ಳಲಾಗಿದ್ದು, ಸುಮಾರು ೧೪ ಸಾವಿರ ಪೊಲೀಸ್ ಸಿಬ್ಬಂದಿ ಹಾಗೂ ಅರೆಸೇನಾ ಪಡೆಗಳ ೨೦೦ ತುಕಡಿಗಳನ್ನು ನಿಯೋಜಿಸಲಾಗಿದೆ. ಗಣ್ಯರ ಸಂಚಾರ ಮಾರ್ಗಗಳಲ್ಲಿ ವಿಶೇಷ ನಿಗಾ ಕ್ಯಾಮೆರಾಗಳನ್ನೂ ಅಳವಡಿಸಲಾಗಿದೆ.

****************

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ, ಜೂನ್ ೨೦೨೫ ರ ಯುಜಿಸಿ ಎನ್‌ಇಟಿ ಇಂಗ್ಲಿಷ್, ವಾಣಿಜ್ಯ ಮತ್ತು ಸಮಾಜಶಾಸ್ತ್ರ ವಿಷಯಗಳ ಮರು ಪರೀಕ್ಷೆಯ ತಾತ್ಕಾಲಿಕ ಉತ್ತರ ಕೀಗಳನ್ನು ಬಿಡುಗಡೆ ಮಾಡಿದೆ.

ಅಭ್ಯರ್ಥಿಗಳು ಈ ತಿಂಗಳ ೧೩ ರವರೆಗೆ ಅಧಿಕೃತ ಯುಜಿಸಿ ಎನ್‌ಇಟಿ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಉತ್ತರ ಕೀಗಳ ಕುರಿತು ಆಕ್ಷೇಪಣೆ ಸಲ್ಲಿಸಬಹುದು.

ಯುಜಿಸಿ ಎನ್‌ಇಟಿ ಪರೀಕ್ಷೆಗೆ ಸಂಬಂಧಿಸಿದಂತೆ ಇಂಗ್ಲಿಷ್, ವಾಣಿಜ್ಯ ಮತ್ತು ಸಮಾಜಶಾಸ್ತ್ರ ಪ್ರಶ್ನೆ ಪತ್ರಿಕೆಗಳಲ್ಲಿ ಹಲವಾರು ದೋಷಗಳ ಬಗ್ಗೆ ದೂರುಗಳು ಬಂದ ನಂತರ ಎನ್‌ಟಿಎ ಮರು ಪರೀಕ್ಷೆಯನ್ನು ಘೋಷಿಸಿತು.

ಇಂಗ್ಲಿಷ್ ಮತ್ತು ವಾಣಿಜ್ಯ ವಿಷಯಗಳ ಪರೀಕ್ಷೆ ಇದೇ ೯ ರಂದು ಮತ್ತು ಸಮಾಜಶಾಸ್ತ್ರ ವಿಷಯದ ಪರೀಕ್ಷೆ ಇದೇ ೧೦ರಂದು ನಡೆಯಿತು.

****************

ಜಮ್ಮು-ಕಾಶ್ಮೀರದಲ್ಲಿ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಸಮಾರೋಪ ಸಮಾರಂಭ ನಡೆಯಿತು. ಸಮಾರಂಭದಲ್ಲಿ ಮಾತನಾಡಿದ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್, ಅಗತ್ಯ ಮೂಲಸೌಕರ್ಯ ನಿರ್ಮಿಸುವ ಮೂಲಕ ೨೦ ಲಕ್ಷ ವೃತ್ತಿಪರರನ್ನು ರೂಪಿಸಲು ಸರ್ಕಾರ ಪ್ರಯತ್ನಿಸುತ್ತಿದೆ ಎಂದು ತಿಳಿಸಿದ್ದಾರೆ.

ಚಿತ್ರೋದ್ಯಮದಲ್ಲಿನ ಸೃಜನಶೀಲ ಆರ್ಥಿಕತೆ ಸುಧಾರಣೆಗಳು ನಿರ್ಮಾಪಕರನ್ನು ಕೃತಿಚೌರ್ಯದಿಂದ ರಕ್ಷಿಸಲು ಸಹಕಾರಿಯಾಗುತ್ತಿವೆ. ೨೦೧೯ರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಚಿತ್ರನಿರ್ಮಾಪಕರಿಗೆ ಕಾಶ್ಮೀರದಲ್ಲಿ ಚಿತ್ರೀಕರಣ ನಡೆಸುವಂತೆ ನೀಡಿದ್ದ ಕರೆಯ ಹಿನ್ನೆಲೆಯಲ್ಲಿ ಈ ಉತ್ಸವ ಆಯೋಜಿಸಲಾಗಿದೆ ಎಂದರು.

ಈ ಉತ್ಸವವು ಯುವಜನರಿಗೆ ಸೇರಿದ್ದಾಗಿದ್ದು, ಯುವ ಪ್ರತಿಭೆಗಳಿಗೆ ತಮ್ಮ ಸೃಜನಶೀಲತೆಯನ್ನು ಪ್ರದರ್ಶಿಸಲು ಉತ್ತಮ ವೇದಿಕೆಯಾಗಿದೆ ಎಂದು ಸಚಿವರು ಹೇಳಿದ್ದಾರೆ.

****************

ತ್ವರಿತಗತಿಯ ಹಣಕಾಸು ನಾವೀನ್ಯತೆಗೆ ಸಮಾನವಾಗಿ ಬಲಿಷ್ಠ ಸುರಕ್ಷತಾ ಕ್ರಮಗಳೂ ಅಗತ್ಯ ಎಂದು ಸೆಬಿ ಅಧ್ಯಕ್ಷ ತುಹಿನ್ ಕಾಂತಾ ಪಾಂಡೆ ಪ್ರತಿಪಾದಿಸಿದ್ದಾರೆ.

ಮುಂಬೈನಲ್ಲಿ ನಡೆದ ಜಾಗತಿಕ ಫಿನ್‌ಟೆಕ್ ಉತ್ಸವದಲ್ಲಿ ಮಾತನಾಡಿದ ಅವರು, ಹಣಕಾಸು ಮಾರುಕಟ್ಟೆಗಳ ಸುಸ್ಥಿರ ಬೆಳವಣಿಗೆಗೆ ನಾವೀನ್ಯತೆ, ವಿಶ್ವಾಸ ಮತ್ತು ಸ್ಥಿತಿಸ್ಥಾಪಕತ್ವ ಜೊತೆಯಾಗಿ ಸಾಗಬೇಕು. ಡಿಜಿಟಲ್ ತಂತ್ರಜ್ಞಾನ, ಎಲೆಕ್ಟ್ರಾನಿಕ್ ಪಾವತಿ ಹಾಗೂ ಬಲಿಷ್ಠ ವಹಿವಾಟು ವ್ಯವಸ್ಥೆಗಳಿಂದ ಭಾರತದ ಷೇರುಪೇಟೆ ವೇಗವಾಗಿ ವಿಸ್ತರಿಸಿದೆ ಎಂದು ಹೇಳಿದ್ದಾರೆ.

ಕೃತಕ ಬುದ್ಧಿಮತ್ತೆ, ಮತ್ತು ಕ್ವಾಂಟಮ್ ತಂತ್ರಜ್ಞಾನಗಳ ಬಳಕೆಯಲ್ಲಿ ಅಪಾಯಗಳು ಹೆಚ್ಚದಂತೆ ನಿಯಂತ್ರಣ ಮತ್ತು ಸುರಕ್ಷತಾ ವ್ಯವಸ್ಥೆ ಬಲಪಡಿಸಬೇಕು. ಕ್ವಾಂಟಮ್ ತಂತ್ರಜ್ಞಾನಕ್ಕೆ ಸುರಕ್ಷಿತ ವ್ಯವಸ್ಥೆಗಳತ್ತ ಹಂತ ಹಂತವಾಗಿ ಪರಿವರ್ತನೆ ಅಗತ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

****************

ಕಾಂಗೋದ ಬುಕಾವು ನಗರದಲ್ಲಿ ಪಕ್ಕಪಕ್ಕದಲ್ಲಿದ್ದ ಎರಡು ಶಾಲೆಗಳಲ್ಲಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಕನಿಷ್ಠ ೨೬ ವಿದ್ಯಾರ್ಥಿಗಳು ಮೃತಪಟ್ಟಿದ್ದು, ೧೨ಕ್ಕೂ ಹೆಚ್ಚು ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ.

ದಕ್ಷಿಣ ಕಿವು ಪ್ರಾಂತ್ಯದ ಸರ್ಕಾರದ ಪ್ರಕಾರ, ಅಗ್ನಿ ಅವಘಡದಲ್ಲಿ ೧೯ ಬಾಲಕಿಯರು ಮತ್ತು ಏಳು ಬಾಲಕರು ಮೃತಪಟ್ಟಿದ್ದಾರೆ. ಕೆಲವರ ಸ್ಥಿತಿ ಗಂಭೀರವಾಗಿದ್ದು, ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗಬಹುದು.

ಮೊದಲು ಒಂದು ಮನೆಯಲ್ಲಿ ಬೆಂಕಿ ಕಾಣಿಸಿಕೊಂಡು, ನಂತರ ಪಕ್ಕದಲ್ಲಿದ್ದ ಎರಡು ಶಾಲೆಗಳಿಗೆ ಹರಡಿತು. ಬೆಂಕಿ ಕಾಣಿಸಿಕೊಳ್ಳಲು ಕಾರಣವೇನೆಂದು ತಿಳಿದುಬಂದಿಲ್ಲ. ಆದರೆ ಬೆಂಕಿ ಅವಘಡ ಸಂಭವಿಸಿರುವ ಪ್ರದೇಶವು ಜನನಿಬಿಡವಾಗಿದ್ದು, ಅಲ್ಲಿನ ಹೆಚ್ಚಿನ ಮನೆಗಳು ಮರದಿಂದ ನಿರ್ಮಿಸಲ್ಪಟ್ಟಿವೆ ಎಂದು ಸ್ಥಳೀಯ ಆಡಳಿತಾಧಿಕಾರಿ ಮೊಯಿಸ್ ಲುಬಾಲಾ ತಿಳಿಸಿದ್ದಾರೆ.

****************

ದುಬೈನಲ್ಲಿ ನಿನ್ನೆ ರಾತ್ರಿ ನಡೆದ ಮಹಿಳಾ ಏಷ್ಯಾ ಕಪ್ ೨೦೨೪ರ ಮೊದಲ ಸೆಮಿಫೈನಲ್ ಪಂದ್ಯದಲ್ಲಿ, ಭಾರತ ತಂಡ, ಬಾಂಗ್ಲಾದೇಶದ ವಿರುದ್ಧ ೪೦ ರನ್‌ಗಳ ಭರ್ಜರಿ ಜಯ ಸಾಧಿಸುವ ಮೂಲಕ ಅತ್ಯುತ್ತಮ ಆಲ್‌ರೌಂಡ್ ಪ್ರದರ್ಶನ ನೀಡಿತು. ಈ ಗೆಲುವಿನೊಂದಿಗೆ ಭಾರತ ಫೈನಲ್‌ಗೆ ಲಗ್ಗೆಯಿಟ್ಟಿದೆ.

೧೫೦ ರನ್‌ಗಳ ಗುರಿ ಬೆನ್ನಟ್ಟಿದ ಬಾಂಗ್ಲಾದೇಶ ತಂಡ, ರನ್ ಗಳಿಕೆಯ ವೇಗವನ್ನು ಕಾಯ್ದುಕೊಳ್ಳಲು ಪರದಾಡಿತು. ಭಾರತೀಯ ಬೌಲರ್‌ಗಳು ನಿರಂತರ ಒತ್ತಡ ಹೇರಿದ ಪರಿಣಾಮ, ಬಾಂಗ್ಲಾದೇಶ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೦೯ ರನ್ ಗಳಿಸಲಷ್ಟೇ ಶಕ್ತವಾಯಿತು.

ಭಾರತದ ಪರ ದೀಪ್ತಿ ಶರ್ಮಾ ಮೂರು ವಿಕೆಟ್ ಹಾಗೂ ನಂದನಿ ಶರ್ಮಾ ಎರಡು ವಿಕೆಟ್ ಪಡೆದರೆ, ಶ್ರೀ ಚರಣಿ ಮತ್ತು ಪ್ರೇಮಾ ರಾವತ್ ತಲಾ ಒಂದು ವಿಕೆಟ್ ಪಡೆದರು.

ಮೊದಲು ಬ್ಯಾಟಿಂಗ್ ಮಾಡಿದ ಭಾರತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೪೯ ರನ್ ಕಲೆಹಾಕಿತು. ಶಫಾಲಿ ವರ್ಮಾ ೬೪ ರನ್ ಗಳಿಸಿ ತಂಡದ ಇನ್ನಿಂಗ್ಸ್‌ಗೆ ಭದ್ರ ಬುನಾದಿ ಹಾಕಿಕೊಟ್ಟರು. ಅಲ್ಲದೇ 'ಪಂದ್ಯಶ್ರೇಷ್ಠ' ಪ್ರಶಸ್ತಿಗೆ ಭಾಜನರಾದರು.

ಇಂದು ನಡೆಯಲಿರುವ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಪಾಕಿಸ್ತಾನ ಮತ್ತು ಶ್ರೀಲಂಕಾ ತಂಡ ದುಬೈನಲ್ಲಿ ಮುಖಾಮುಖಿಯಾಗಲಿವೆ. ಈ ಪಂದ್ಯ ಭಾರತೀಯ ಕಾಲಮಾನದ ಪ್ರಕಾರ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಈ ಪಂದ್ಯದ ವಿಜೇತರು ಭಾನುವಾರ ನಡೆಯಲಿರುವ ಫೈನಲ್‌ನಲ್ಲಿ ಭಾರತವನ್ನು ಎದುರಿಸಲಿದ್ದಾರೆ.

****************

ದಕ್ಷಿಣ ಕೊರಿಯಾದ ಚಾಂಗ್ವಾನ್‌ನಲ್ಲಿ ನಿನ್ನೆ ಆರಂಭವಾದ ವಿಶ್ವ ಪ್ಯಾರಾ ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಭಾರತ ೧ ಚಿನ್ನ, ೨ ಬೆಳ್ಳಿ ಮತ್ತು ೧ ಕಂಚು ಸೇರಿದಂತೆ ೪ ಪದಕಗಳನ್ನು ಗೆದ್ದು ಉತ್ತಮ ಆರಂಭ ಕಂಡಿದೆ.

ಮಹಿಳೆಯರ ೧೦ ಮೀಟರ್ ಏರ್ ರೈಫಲ್ ಸ್ಟ್ಯಾಂಡಿಂಗ್ ವಿಭಾಗದ ತಂಡ ಸ್ಪರ್ಧೆಯಲ್ಲಿ ಮೋನಾ ಅಗರ್ವಾಲ್, ಅವನಿ ಲೇಖರಾ ಮತ್ತು ಮಿಲಿ ಶಾ ಅವರನ್ನು ಒಳಗೊಂಡ ಭಾರತ ತಂಡ ಚಿನ್ನದ ಪದಕ ಗೆದ್ದಿತು. ವೈಯಕ್ತಿಕ ಸ್ಪರ್ಧೆಯಲ್ಲಿ ಮೋನಾ ಅಗರ್ವಾಲ್ ಬೆಳ್ಳಿ ಹಾಗೂ ಅವನಿ ಲೇಖರಾ ಕಂಚು ವಿಜೇತರಾದರು.

ಪುರುಷರ ೧೦ ಮೀಟರ್ ಏರ್ ರೈಫಲ್ ಸ್ಟ್ಯಾಂಡಿಂಗ್ ತಂಡ ಸ್ಪರ್ಧೆಯಲ್ಲಿ ರಾಕೇಶ್ ನಿಡಗುಂಡಿ, ಆನಂದ ಕೃಷ್ಣ ಮತ್ತು ಸ್ವರೂಪ್ ಉನ್ಹಾಳ್ಕರ್ ಅವರನ್ನು ಒಳಗೊಂಡ ಭಾರತ ತಂಡ ಬೆಳ್ಳಿ ಪದಕ ಗೆದ್ದಿತು.

ಮೋನಾ ಅಗರ್ವಾಲ್ ಅವರು ೨೦೨೮ರ ಲಾಸ್ ಏಂಜಲೀಸ್ ಪ್ಯಾರಾಲಿಂಪಿಕ್ಸ್‌ಗೆ ಅರ್ಹತೆ ಪಡೆದ ಮೊದಲ ಭಾರತೀಯ ಶೂಟರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

******** ಮುಕ್ತಾಯ ********